# ಸಚಿವ ಸಂಪುಟ ಸಭೆಯ ತೀರ್ಮಾನಗಳು

ಬೆಂಗಳೂರು, ಅಗಸ್ಟ್ 02 :_ಇಂದು ನಡೆದ ಸಚಿವ ಸಂಪುಟದ ಪ್ರಮುಖ ತೀರ್ಮಾನಗಳನ್ನು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮತ್ತು ಪಂಚಾಯತ್ ರಾಜ್ ಸಚಿವ ಶ್ರೀ ಕೃಷ್ಣಬೈರೇಗೌಡ ಅವರು ಮಾಧ್ಯಮ ಪ್ರತಿನಿಧಿಗಳಿಗೆ ವಿವರಿಸಿದರು.

ಪ್ರಮುಖ ನಿರ್ಣಯಗಳು ಈ ಕೆಳಕಂಡಂತಿದೆ:

1. ಬೆಂಗಳೂರಿನ **Centre for Cellular and Molecular Platforms (C-CAMP)** ನಲ್ಲಿ ಆಗ್ರಿ-ಇನ್ನೋವೇಷನ್‌ಗಾಗಿ ಉತ್ಕೃಷ್ಟತಾ ಕೇಂದ್ರವನ್ನು **(Centre for Excellence)** ರೂ. 15.00 ಕೋಟಿಗಳ ಅಂದಾಜು ಸ್ಥಾಪಿಸಲು ಅನುಮೋದನೆ ನೀಡಲಾಗಿದೆ ಇದರಿಂದ ಕೃಷಿ ಸಂಬಂಧಿತ ಹೊಸ ಆವಿಷ್ಕಾರಗಳನ್ನು ಪ್ರೋತ್ಸಾಹಿಸಲು ಅನುಕೂಲವಾಗುತ್ತದೆ.

2. ಕೈಗಾರಿಕೋದ್ಯಮ ಇಲಾಖೆಯಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಯಡಿ ಬೃಹತ್ ಬಂಡವಾಳ ಹೂಡಿಕೆ ಪ್ರಸ್ತಾವನೆಗಳನ್ನು ಪರಿಶೀಲಿಸಿ ವಿಶೇಷ ರಿಯಾಯಿತಿ ಮತ್ತು ಉತ್ತೇಜನಗಳನ್ನು ಮಂಜೂರು ಮಾಡಲು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿ ರಚನೆ ಮಾಡಲು ಅನುಮೋದನೆ ನೀಡಲಾಗಿದೆ. ಈ ಸಮಿತಿಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು, ಕಂದಾಯ ಸಚಿವರು ಹಾಗೂ ಸಣ್ಣ ಕೈಗಾರಿಕಾ ಸಚಿವರು ಇರುತ್ತಾರೆ.

3. ಮುಧೋಳ ಪಟ್ಟಣದಲ್ಲಿ ಹೊರ ವರ್ತುಲ ರಸ್ತೆ ನಿರ್ಮಾಣ ಮಾಡಲು 55.50 ಕೋಟಿ ರೂಪಾಯಿಗಳ ವೆಚ್ಚದ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ.

4. ಕರ್ನಾಟಕ ನೀರಾವರಿ ನಿಗಮಕ್ಕೆ 2018-19ನೇ ಸಾಲಿನಲ್ಲಿ ಐಇಬಿಆರ್ ಅಡಿಯಲ್ಲಿ ಅವಧಿ ಸಾಲದ ಮೂಲಕ 765 ಕೋಟಿ ಹಣ ಸಂಗ್ರಹಣೆ ಮಾಡಲು ಸರ್ಕಾರಿ ಖಾತರಿ ನೀಡಲು ಅನುಮೋದನೆ ನೀಡಲಾಯಿತು.

5. ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕು ಕಟ್ಟೆಬೆಳಗುಳಿ ಸಮೀಪ ಹೇಮಾವತಿ ನದಿಗೆ ಅಡ್ಡಲಾಗಿ ನಿರ್ಮಾಣ ಮಾಡಿರುವ ಶ್ರೀರಾಮ ದೇವರ ಅಣೆಕಟ್ಟು ಪುನರ್ ನಿರ್ಮಾಣಕ್ಕೆ 120 ಕೋಟಿ ರೂಪಾಯಿಗಳ

ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲು ಅನುಮೋದನೆ ಕೋರಲಾಗಿತ್ತು. ಇದರಲ್ಲಿ ಅತಿಥಿ ಗೃಹ ಹಾಗೂ ಸೌಂದರೀಕಣದ ವೆಚ್ಚವನ್ನು ಹೊರತುಪಡಿಸಿ ಉಳಿದ ಮೊತ್ತಕ್ಕೆ ಅನುಮೋದನೆ ನೀಡಲಾಯಿತು.

6. ಸರ್ಕಾರಿ ವೈದ್ಯಕೀಯ ಕಾಲೇಜುಗಳ ಅಧೀನದಲ್ಲಿರುವ ರಾಜ್ಯದ 4 ಆಸ್ಪತ್ರೆಗಳನ್ನು ಮೇಲ್ದರ್ಜೆಗೆರಿಸಲು ಅನುಮೋದನೆ ನೀಡಲಾಗಿದೆ.

7. ಕೊಪ್ಪಳ, ಗದಗ, ಮೈಸೂರು ಮತ್ತು ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ ಹಾಗೂ ಮೈಸೂರಿನ ಪಿಕೆಟಿಬಿ ಆಸ್ಪತ್ರೆಯ ಆವರಣದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿಯ ಟೆಂಡರ್ ಮೊತ್ತಕ್ಕೆ ಪರಿಷ್ಕೃತ ಆಡಳಿತ್ಮಾತಕ ಅನುಮೋದನೆ ನೀಡಿದೆ. ಕೊಪ್ಪಳ ಆಸ್ಪತ್ರೆಗೆ ರೂ. 114 ಕೋಟಿ, ಗದಗ ಆಸ್ಪತ್ರೆಗೆ ರೂ. 112 ಕೋಟಿ, ಮೈಸೂರು ಆಸ್ಪತ್ರೆಗೆ 134 ಕೋಟಿ ಮತ್ತು ಚಾಮರಾಜನಗರ ರೂ. 113 ಕೋಟಿ ವೆಚ್ಚದಲ್ಲಿ ಇಲ್ಲಿನ ಆಸ್ಪತ್ರೆಗಳನ್ನು ಮೇಲ್ದರ್ಜೆಗೆರಿಸಲು ಅನುಮೋದನೆ ನೀಡಿದೆ.

8. ಮುಜರಾಯಿ ಇಲಾಖೆ ವ್ಯಾಪ್ತಿಯಲ್ಲಿ ಹಲವು ದೇವಸ್ಥಾನದ ಆಡಳಿತ ಮಂಡಳಿಗಳು ರಾಜ್ಯದ ವಿವಿಧ ಭಾಗಗಳಲ್ಲಿ ಒಟ್ಟು 22 ಶೈಕ್ಷಣಿಕ ಸಂಸ್ಥೆಗಳನ್ನು ನಡೆಸುತ್ತಿದ್ದು, ಇಲ್ಲಿ ಶಿಕ್ಷಕರ ನೇಮಕಾತಿಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ನೇಮಕಾತಿ ನಿಮಯಗಳನ್ನು ರೂಪಿಸಿ ಸಚಿವ ಸಂಪುಟದಲ್ಲಿ ಅನುಮತಿ ನೀಡಲಾಗಿದೆ. ಮೆರಿಟ್, ಮೀಸಲಾತಿ ಮತ್ತು ರೊಸ್ಟರ್ ನಿಯಮಗಳನ್ನು ಪಾಲಿಸಲು ಸೂಚಿಸಲಾಗಿದೆ.

----------------